ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತಿನ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE : 9/1/21


# ಮೇಲ್ಮನೆ ಸದನ ಸಮಿತಿ ಸಭೆ ಮುನ್ನವೇ ವಿಶ್ವನಾಥ್, ಸಂಕನೂರು ರಾಜೀನಾಮೆ!

9/1/21

ವಿಧಾನಪರಿಷತ್‌ನಲ್ಲಿ ನಡೆದ ಗಲಭೆ, ತಿಕ್ಕಾಟ ಘಟನೆ ಕುರಿತು
**ಬೆಂಗಳೂರು:** ಪರಿಶೀಲನೆ ನಡೆಸಲು ರಚನೆಯಾಗಿದ್ದ ಸದನ ಸಮಿತಿಗೆ ಬಿಜೆಪಿ ಸದಸ್ಯರಾದ ಎಚ್.
ವಿಶ್ವನಾಥ್ ಮತ್ತು ಎಸ್.ವಿ. ಸಂಕನೂರು ದಿಢೀರ್ ರಾಜೀನಾಮೆ ನೀಡಿದ್ದು, ಈ
ಬೆಳವಣಿಗೆಯಿಂದ ಸಭಾಪತಿ ಪ್ರತಾಪ್ ಚಂದ್ರಶೆಟ್ಟಿ ಅವರಿಗೆ ಹಿನ್ನಡೆಯಾಗಿದೆ.
ಬಿಜೆಪಿ ಸದಸ್ಯ ಆಯನೂರು ಮಂಜುನಾಥ್ ಅವರು ಸದನ ಸಮಿತಿ ರಚನೆಗೆ ತೀವ್ರ
ಆಕ್ಷೇಪ ವ್ಯಕ್ತಪಡಿಸಿ ಸಭಾಪತಿ ಅವರಿಗೆ ಪತ್ರ ಬರೆದಿದ್ದರು. ಸದನ ಸಮಿತಿ
ರದ್ದುಗೊಳಿಸಿ ನೀತಿ ನಿರೂಪಣಾ ಸಮಿತಿಗೆ ವಹಿಸಬೇಕು ಎಂದು ಆಗ್ರಹಿಸಿದ್ದರು.
ಇದರ ಬೆನ್ನಲ್ಲೇ ಇಬ್ಬರು ಸದಸ್ಯರು ರಾಜೀನಾಮೆ ನೀಡಿರುವುದು ತೀವ್ರ ಕುತೂಹಲ
ಮೂಡಿಸಿದೆ. ಸದನ ಸಮಿತಿಯ ಮೊದಲ ಸಭೆಗೆ ಆಗಮಿಸಿದ್ದ ಎಚ್.ವಿಶ್ವನಾಥ್
ಮತ್ತು ಸಂಕನೂರು ಅವರು ಸಭೆ ಆರಂಭವಾಗುತ್ತಿದ್ದಂತೆ ಸಮಿತಿಯಲ್ಲಿ ತಾವು
ಮುಂದುವರಿಯುವುದಿಲ್ಲ. ನಮ್ಮ ರಾಜೀನಾಮೆಯನ್ನು ತೆಗೆದುಕೊಳ್ಳಿ ಎಂದು
ಹೇಳಿ ಸಮಿತಿ ಅಧ್ಯಕ್ಷ ಮರಿತಿಬ್ಬೇಗೌಡ ಅವರಿಗೆ ನೀಡಿದರು.